ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

## ಪತ್ರಿಕಾ ತುಣುಕುಗಳು
## PAPER CLIPPINGS

2

ಇಲಾಖೆ / ವಿಷಯ : DEPARTMENT / SUBJECT: ಬಿ.ಬಿ.ಎಂ.ಪಿ.

ಪತ್ರಿಕೆಯ ಹೆಸರು : NAME OF THE NEWS PAPER: ಕನ್ನಡ ಪ್ರಭ

ದಿನಾಂಕ : DATE : 7/10/10

---

ಸಮಿತಿ ರಚನೆ | 198 ವಾರ್ಡ್‌ಗಳ ಸಂಖ್ಯೆ 243ಕ್ಕೆ ಏರಿಕೆ

# ವಾರ್ಡ್ ಮರುವಿಂಗಡಣೆ ಸಮಿತಿಗೆ ಆಯುಕ್ತರ ನೇತೃತ್ವ

• ಕನ್ನಡಪ್ರಭ ವಾರ್ತೆ ಬೆಂಗಳೂರು

ಬಿಬಿಎಂಪಿ ವಾರ್ಡ್‌ಗಳ ಸಂಖ್ಯೆಯನ್ನು ಈಗಿನ 198ರಿಂದ 243ಕ್ಕೆ ಹೆಚ್ಚಿಸುವ ಸಂಬಂಧ ವಾರ್ಡ್ ಮರುವಿಂಗಡಣೆಗೆ ಬಿಬಿಎಂಪಿ ಆಯುಕ್ತ ಎಸ್.ಮಂಜುನಾಥ ಪ್ರಸಾದ್ ನೇತೃತ್ವದಲ್ಲಿ ಸಮಿತಿ ರಚಿಸಲಾಗಿದೆ.

ವಾರ್ಡ್‌ಗಳ ಸಂಖ್ಯೆ ಹೆಚ್ಚಿಸುವ ಹಾಗೂ ಮರುವಿಂಗಡಣೆ ಸಂಬಂಧ ಕರ್ನಾಟಕ ನಗರ ಪಾಲಿಕೆಗಳ (3ನೇ ತಿದ್ದುಪಡಿ) ಅಧಿನಿಯಮಕ್ಕೆ ರಾಜ್ಯಪಾಲರು ಇತ್ತೀಚೆಗೆ ಒಪ್ಪಿಗೆ ನೀಡಿದ್ದಾರೆ. ಈ ಹಿನ್ನೆಲೆಯಲ್ಲಿ ಸರ್ಕಾರದ ಸೂಚನೆಯಂತೆ ಮರು ವಿಂಗಡಣೆಗೆ ಸಮಿತಿ ರಚಿಸಲಾಗಿದ್ದು, ಸಮಿತಿಯಲ್ಲಿ ಬೆಂಗಳೂರು ನಗರ ಜಿಲ್ಲಾಧಿಕಾರಿ, ಬಿಡಿಎ ಆಯುಕ್ತ ಹಾಗೂ ಬಿಬಿಎಂಪಿಯ ವಿಶೇಷ ಆಯುಕ್ತ (ಕಂದಾಯ)ರು ಸಹ ಸದಸ್ಯರಾಗಿದ್ದಾರೆ.

ಸದ್ಯ ಪಾಲಿಕೆ ವಾರ್ಡ್ ಮರುವಿಂಗಡಣೆ ಮಾಡುವುದಕ್ಕೆ ಸಮಿತಿ ರಚನೆ ಮಾಡಲಾಗಿದೆ. ಗಡಿ ನಿರ್ಧಾರ ಆಯೋಗವನ್ನು ಮುಂದಿನ ವಾರ ರಚನೆ ಮಾಡುವ ಸಾಧ್ಯತೆ ಇದೆ. ವಾರ್ಡ್ ಸಂಖ್ಯೆ ಹೆಚ್ಚಳ ಮಾಡುವಾಗ ವಿಧಾನಸಭಾ ಕ್ಷೇತ್ರದ ವಾರ್ಡ್‌ಗಳನ್ನು ಅದೇ ಕ್ಷೇತ್ರದ ವ್ಯಾಪ್ತಿಯಲ್ಲಿ ಪುನರ್ ವಿಂಗಡಣೆ ಮಾಡಿ ವಾರ್ಡ್ ಸಂಖ್ಯೆ ಹೆಚ್ಚಳ ಮಾಡಲಾಗುತ್ತದೆ. ಯಾವುದೇ ಕಾರಣಕ್ಕೂ ಒಂದು ವಿಧಾನಸಭಾ ಕ್ಷೇತ್ರದ ವಾರ್ಡ್‌ಗಳನ್ನು ಮತ್ತೊಂದು ವಿಧಾನಸಭಾ ಕ್ಷೇತ್ರಗಳ ವ್ಯಾಪ್ತಿಗೆ ಸೇರ್ಪಡೆ ಮಾಡುವಂತಿಲ್ಲ. ಈ ಬಗ್ಗೆ ಸರ್ಕಾರ ಸ್ಪಷ್ಟ ನಿರ್ದೇಶನ ನೀಡಿದೆ.

> ವಾರ್ಡ್ ಮರು ವಿಂಗಡಣೆ ಕಾರ್ಯವನ್ನು ಸಮಿತಿ ಮಾಡಿ ಸರ್ಕಾರಕ್ಕೆ ನೀಡಲಿದೆ. ಇದರಲ್ಲಿ ಯಾವುದೇ ಹಸ್ತಕ್ಷೇಪವಾಗದಂತೆ ನೋಡಿಕೊಳ್ಳುವ ಉದ್ದೇಶದಿಂದ ಸಮಿತಿಯಲ್ಲಿ ಅಧಿಕಾರಿಗಳನ್ನು ಮಾತ್ರ ಸೇರಿಸಲಾಗಿದೆ.
>
> • **ಎಸ್.ರಘು** ಅಧ್ಯಕ್ಷ, ಬಿಬಿಎಂಪಿ ಪುನರ್ ರಚನೆ ಜಂಟಿ ಸದನ ಸಮಿತಿ